ವಿಧಾನ ಪರಿಷತ್ತು ಮಾನ್ಯ ಸದಸ್ಯರಾದ ಶ್ರೀ ಯು.ಬಿ.ವೆಂಕಟೇಶ್ ರವರು
**ಶೂನ್ಯವೇಳೆರಡಿ ನೀಡಿರುವ ಸೂಚನೆಗೆ ಉತ್ತರ**

ವಿಷಯ: ಕರ್ನಾಟಕ ಮತ್ತು ತಮಿಳುನಾಡಿನಲ್ಲಿ ಮಕ್ಕಳ ಮಾರಾಟದ ಸಕ್ರಿಯಜಾಲ ಬೇರೂರಿದ್ದು, ಕಳೆದ ಆರು ವರ್ಷಗಳಲ್ಲಿ 60ಕ್ಕೂ ಹೆಚ್ಚು ಮಕ್ಕಳು ಮಾರಾಟವಾಗಿರುವ ಬಗ್ಗೆ ದಿನಾಂಕ:01.12.2023 ಪತ್ರಿಕೆಗಳಲ್ಲಿ ವರದಿಯಾಗಿರುತ್ತದೆ.

ಒಂದು ಗಂಡು ಮಗುವಿಗೆ 8 ಲಕ್ಷದಿಂದ 10ಲಕ್ಷ ಹೆಣ್ಣು ಮಗುವಿಗೆ 4 ಲಕ್ಷದಿಂದ 5ಲಕ್ಷ ಹಣವನ್ನು ಪಡೆದು ದೊಡ್ಡ ಮಟ್ಟದಲ್ಲಿ ಹಣದ ವ್ಯವಹಾರ ನಡೆದಿರುವುದು ಪೊಲೀಸರ ಮಾಹಿತಿ ಪ್ರಕಾರ ತಿಳಿದು ಬಂದಿರುತ್ತದೆ.

ಇದರ ಜೊತೆಗೆ ಕಳೆದ ಐದು ವರ್ಷಗಳಲ್ಲಿ 10687 ಮಕ್ಕಳ ನಾಪತ್ತೆ ಪ್ರಕರಣದ ಬಗ್ಗೆಯೂ ಸಹ ವರದಿಯಾಗಿದ್ದು, ಈ ಪೈಕಿ 1578 ಮಕ್ಕಳು ಪತ್ತೆಯಾಗಿಲ್ಲ. ಈವರೆಗೆ ಪತ್ತೆಯಾಗದ ಮಕ್ಕಳ ಪೈಕಿ ಗಂಡು ಮಕ್ಕಳು ಸಂಖ್ಯೆ 383 ರಷ್ಟಾದರೆ, ಹೆಣ್ಣು ಮಕ್ಕಳ ಸಂಖ್ಯೆ 1195 ಆಗಿದೆ. ಈ ಕುರಿತಂತೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗ ರಾಜ್ಯದಲ್ಲಿ ಮಕ್ಕಳ ಮಾರಾಟ ಮತ್ತು ಕಳ್ಳತನದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು ಸೂಕ್ತ ತನಿಖೆ ನಡೆಸುವಂತೆ ಒತ್ತಾಯಿಸಿರುವುದು ವರದಿಯಾಗಿರುತ್ತದೆ.

ರಾಜ್ಯದಲ್ಲಿ ಮಾನವ ಕಳ್ಳಸಾಗಾಣಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರವು ನಿರ್ಭಯ ನಿಧಿ ಅಡಿಯಲ್ಲಿ 35 ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸಿದ್ದು, ಹೆಚ್ಚಿನ ಗಸ್ತುಗಳಿದ್ದರೂ ಮಕ್ಕಳ ನಾಪತ್ತೆ ಮತ್ತು ಮಾರಾಟ ಪ್ರಕರಣಗಳು ಮರುಕಳಿಸುತ್ತಿರುವುದು ವಿಷಾಧದ ಸಂಗತಿಯಾಗಿರುತ್ತದೆ.

ಆದಕಾರಣ, ಈ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಗಮನಹರಿಸಿ ಯಾವ ರೀತಿಯಲ್ಲಿ ಬಿಗಿಯಾದ ಕ್ರಮಗಳನ್ನು ಕೈಗೊಳ್ಳಬಹುದೆನ್ನುವ ಬಗ್ಗೆ ಸಂಬಂಧಿಸಿದ ಇಲಾಖೆಗಳವರೊಂದಿಗೆ ಚರ್ಚಿಸಿ ಕಠಿಣ ನಿರ್ಧಾರಗಳನ್ನು ಕೈಗೊಳ್ಳಬೇಕೆಂದು ಮಾನ್ಯ ಗೃಹ ಸಚಿವರನ್ನು ಶೂನ್ಯವೇಳೆಯಲ್ಲಿ ಒತ್ತಾಯಿಸುತ್ತೇನೆ.

ಉತ್ತರ: ರಾಜ್ಯದಲ್ಲಿ ಮಕ್ಕಳ ಮಾರಾಟ ಮತ್ತು ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ನಗರದ ರಾಜರಾಜೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ಮೊ.ಸಂ.486/2023 ಕಲಂ. 370(4), 34 ಐಪಿಸಿ, ಕಲಂ.80, 81 ಜುವೆನೈಲ್ ಜಸ್ಟೀಸ್ ಕಾಯ್ದೆರಡಿ ಪ್ರಕರಣ ದಾಖಲಾಗಿದ್ದು, ಸದರಿ ಪ್ರಕರಣವನ್ನು ದಿನಾಂಕ:01.12.2023 ರಂದು ಸಿಐಡಿ ತನಿಖೆಗೆ ವರ್ಗಾಯಿಸಲಾಗಿದೆ. ಹಾಲಿ ಪ್ರಕರಣವು ಸಿಐಡಿಯ ಎ.ಹೆಚ್.ಟಿ.ಯು. ವಿಭಾಗದಲ್ಲಿ ತನಿಖೆಯಲ್ಲಿರುತ್ತದೆ.

ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ವರದಿಯಾಗಿರುವ ಕಾಣೆಯಾದ, ಪತ್ತೆ ಹಚ್ಚಲಾದ ಮತ್ತು ಪತ್ತೆಗೆ ಬಾಕಿ ಇರುವ ಪ್ರಕರಣಗಳ ಅಂಕಿ-ಅಂಶಗಳು ಈ ಕೆಳಕಂಡಂತಿದೆ.

| ವರ್ಷ | ವರದಿ | | ಪತ್ತೆ | | ಪತ್ತೆಗೆ ಬಾಕಿ | |
|---|---|---|---|---|---|---|
| | ಗಂಡು ಮಕ್ಕಳು | ಹೆಣ್ಣು ಮಕ್ಕಳು | ಗಂಡು ಮಕ್ಕಳು | ಹೆಣ್ಣು ಮಕ್ಕಳು | ಗಂಡು ಮಕ್ಕಳು | ಹೆಣ್ಣು ಮಕ್ಕಳು |
| 2018 | 325 | 445 | 302 | 436 | 23 | 09 |
| 2019 | 813 | 1311 | 764 | 1276 | 49 | 35 |

Scanned with CamScanner

| | | | | | | |
|---|---|---|---|---|---|---|
| 2020 | 421 | 1136 | 400 | 1099 | 21 | 37 |
| 2021 | 488 | 1630 | 460 | 1566 | 28 | 64 |
| 2022 | 745 | 1831 | 703 | 1729 | 42 | 102 |
| 2023 (ಅಕ್ಟೋಬರ್) | 731 | 1837 | 547 | 1231 | 184 | 606 |

ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ (2018 ರಿಂದ 2023 ಅಕ್ಟೋಬರ್ ಮಾಹೆಯ ಅಂತ್ಯಕ್ಕೆಒಟ್ಟು 11713 ಹೆಣ್ಣು ಮತ್ತು ಗಂಡು ಮಕ್ಕಳ ಕಾಣೆ ಪ್ರಕರಣಗಳು ವರದಿಯಾಗಿರುತ್ತವೆ. ಕಾಣೆ ಪ್ರಕರಣಗಳ ಪೈಕಿ 10513 ಮಕ್ಕಳನ್ನು ಪತ್ತೆ ಹಚ್ಚಲಾಗಿರುತ್ತದೆ. ಉಳಿದ 1200 ಮಕ್ಕಳನ್ನು ಪತ್ತೆ ಹಚ್ಚಲು ಬಾಕಿ ಇದ್ದು, ಪ್ರತಿ ಕಾಣೆ ಪ್ರಕರಣವನ್ನು ಅತಿಮುಖ್ಯ ಮತ್ತು ಪ್ರಾಮುಖ್ಯ ಪ್ರಕರಣವೆಂದು ಪರಿಗಣಿಸಿ, ಪತ್ತೆ ಕಾರ್ಯವನ್ನು ಪ್ರಮಾಣಿಕವಾಗಿ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಮಾನವ ಕಳ್ಳಸಾಗಾಣೆಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರವು ನಿರ್ಭಯ ನಿಧಿ ಅಡಿಯಲ್ಲಿ 35 ಮಾನವಕಳ್ಳ ಸಾಗಾಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸಿರುತ್ತದೆ. ಮಕ್ಕಳ ನಾಪತ್ತೆ ಮತ್ತು ಮಾರಾಟ ಪ್ರಕರಣಗಳ ಪತ್ತೆ ಕಾರ್ಯದಲ್ಲಿ ಹೆಚ್ಚಿನ ಗಮನ ಹರಿಸಲು ಇದು ಸಹಾಯಕವಾಗಿರುತ್ತದೆ.

**ಮಕ್ಕಳ ಮಾರಾಟ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ;**

- ಅಪಹರಣ ಪ್ರಕರಣ ವರದಿಯಾದ ಕೂಡಲೇ ಈ ಬಗ್ಗೆ ರಾಜ್ಯದ ಎಲ್ಲಾ ಠಾಣೆಗಳಿಗೆ ಪ್ರಕರಣದ ಆರೋಪಿ ಮತ್ತು ಅಪಹರಿಸಿರುವ ಮಗುವಿನ ಬಗ್ಗೆ, ಯಾವುದೇ ಸುಳಿವು ದೊರೆತರೆ ಮಾಹಿತಿ ಪಡೆದುಕೊಳ್ಳಲು ಪೋಷಕರ ಒಪ್ಪಿಗೆ ಮೇರೆಗೆ ಪತ್ರಿಕಾ ಪ್ರಕಟಣೆ, ದೂರದರ್ಶನ, ಆಕಾಶವಾಣಿ ಇತ್ಯಾದಿ ಮಾದ್ಯಮಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ರಾಜ್ಯದ ಗಡಿ ಪ್ರದೇಶಗಳಲ್ಲಿ ಮತ್ತು ಬಸ್ ನಿಲ್ದಾಣ/ರೈಲ್ವೆ ನಿಲ್ದಾಣಗಳಲ್ಲಿ ಭಿತ್ತಿ ಪತ್ರಗಳನ್ನು/ಫೋಟೋಗಳನ್ನು ಅಂಟಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.
- ರಿಜಿನಲ್ ಪಾಸ್‌ಪೋರ್ಟ್ ಆಫೀಸ್ ರವರಿಗೆ ಯಾರಾದರೂ ನವಜಾತ ಮಕ್ಕಳಿಗೆ ಪಾಸ್ ಪೋರ್ಟ್‌ಗೆ ಅರ್ಜಿ ಸಲ್ಲಿಸಿರುವರೇ? ಎಂಬ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ.
- ಕೃತ್ಯ ನಡೆದ ಸ್ಥಳದಲ್ಲಿ ಹಾಗೂ ಸುತ್ತಾಮುತ್ತ ಲಭ್ಯವಿದ್ದ ಸಿಸಿಟಿವಿ ಕ್ಯಾಮರದ ಫುಟೇಜ್‌ಗಳನ್ನು ಪರಿಶೀಲನೆ ಮಾಡಲಾಗುತ್ತದೆ.
- ಲಭ್ಯವಿರುವ ಮಾಹಿತಿಯೊಂದಿಗೆ (ಚಹರೆ) ಟ್ರಾಕ್ ಚೈಲ್ಡ್ ತಂತ್ರಾಂಶದಲ್ಲಿ ಮಗುವಿನ ದೈಹಿಕ ಚಹರೆಯನ್ನು ಮಿಸ್ಸಿಂಗ್ ಪರ್ಸನ್ ಬ್ಯೂರೋಗೆ ಕಳುಹಿಸಿ, ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾನವ ಕಳ್ಳಸಾಗಾಣಿಕೆ ಪ್ರಕರಣಗಳನ್ನು ತಡೆಗಟ್ಟಲು ಮಾನವ ಕಳ್ಳಸಾಗಾಣಿಕೆ ನಿಷೇಧ ಘಟಕ ಹಾಗೂ ಸಂಬಂಧಪಟ್ಟ ಎಸ್‌ಸಿಆರ್‌ಬಿ (ರಾಜ್ಯ ಅಪರಾಧ ದಾಖಲಾತಿ ಘಟಕ) ಮತ್ತು ಎನ್‌ಸಿಆರ್‌ಬಿ (ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ) ಪೋಲೀಸ್ ಅಧಿಕಾರಿಗಳನ್ನು ಸಂಪರ್ಕಿಸಿ, ಮಾನವ ಕಳ್ಳಸಾಗಾಣಿಕೆ ಅಪರಾಧಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ.

Scanned with CamScanner

- ಅಪಹರಣಕ್ಕೊಳಗಾದ ಮಗುವಿನ ಭಾವಚಿತ್ರಗಳ ನೋಟೀಸುಗಳನ್ನು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂಟಿಸುವ ಮೂಲಕ, ಸಾಮಾಜಿಕ ಜಾಲತಾಣಗಳಲ್ಲಿ, ಎಲ್ಲಾ ವರ್ಗದ ಜನತೆಯನ್ನೂ ತಲುಪುವಂತೆ ವ್ಯಾಪಕ ಪ್ರಚಾರ ನೀಡಿ ಸಾರ್ವಜನಿಕರ ಸಹಕಾರದಿಂದ ಈ ಪ್ರಕರಣದಲ್ಲಿ ಅಪಹರಣಕ್ಕೊಳಗಾದ ಮಗು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುತ್ತದೆ.
- ಶಾಪಿಂಗ್ ಮಾಲುಗಳು, ಉದ್ಯಾನವನಗಳು, ಮನರಂಜನಾ ಸ್ಥಳಗಳು, ಕ್ರೀಡಾ ಸ್ಥಳಗಳು, ಮತ್ತು ಅಪಹರಣಕ್ಕೊಳಗಾದ ಮಕ್ಕಳು ಸಾಮಾನ್ಯವಾಗಿ ಇರಬಹುದಾದ ಸ್ಥಳಗಳಲ್ಲಿ ಶೋಧನೆ ಮಾಡಿ ಅಪಹರಣಕ್ಕೊಳಗಾದ ಮಗುವನ್ನು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುವುದು.
- ಸರ್ಕಾರೇತರ ಎನ್.ಜಿ.ಓಗಳ ಸಹಕಾರದೊಂದಿಗೆ ಕಾಣೆಯಾದ ಮಕ್ಕಳ ಪತ್ತೆಗಾಗಿ ಶ್ರಮಿಸಲಾಗುತ್ತಿದೆ.
- ನಿರ್ಮಾಣದ ಹಂತದಲ್ಲಿರುವಂತಹ ಕಟ್ಟಡಗಳು, ಬಳಕೆಯಾಗದಂತಹ ಕಟ್ಟಡಗಳು, ಆಸ್ಪತ್ರೆಗಳು ಮತ್ತು ಔಷಧಾಲಯಗಳು, ರೈಲ್ವೆ ಪೊಲೀಸರು ಮತ್ತಿತರ ಸ್ಥಳಗಳಲ್ಲಿ ವಿಚಾರಣೆ ನಡೆಸಿ ಅವರಿಂದ ಮಾಹಿತಿಯನ್ನು ಸಂಗ್ರಹಿಸಿ ಅಪಹರಣಕ್ಕೊಳಗಾದ ಮಗುವನ್ನು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುವುದು.
- ಕಾಣೆಯಾದ ಪ್ರಕರಣಗಳ ಪೈಕಿ 60 ದಿನದೊಳಗೆ ಪತ್ತೆಯಾಗದ ಪ್ರಕರಣಗಳನ್ನು ಪರಿಣಾಮಕಾರಿ ತನಿಖೆಗಾಗಿ ವಿಶೇಷ ಘಟಕವಾದ ಎ.ಹೆಚ್.ಟಿ.ಯು. (Anti Human Trafficking Unit) ಘಟಕಗಳಿಗೆ ವರ್ಗಾವಣೆ ಮಾಡುವುದು.
- ಅನಾಥಾಶ್ರಮಗಳಲ್ಲಿ, ಆಶ್ರಮಗಳಲ್ಲಿ, ಆಧ್ಯಾತ್ಮಿಕ ಸ್ಥಳಗಳಲ್ಲಿ ಮತ್ತು ಬಾಲಮಂದಿರಗಳಲ್ಲಿ ಹುಡುಕುವುದು.
- ಲುಕ್‌ಔಟ್ ನೋಟೀಸ್ ನೀಡುವುದು, ಅಕ್ಕ-ಪಕ್ಕದ ಜಿಲ್ಲೆಗಳಲ್ಲಿ ಕಾಣೆಯಾದ ಮಕ್ಕಳ ಕುರಿತು ಹುಡುಕಾಟ ನಡೆಸುವುದು.
- ದಕ್ಷ ಅಧಿಕಾರಿಗಳ ತಂಡವನ್ನು ನಿರ್ಮಿಸಿ, ಎಲ್ಲಾ ಕಡೆ ಹುಡುಕಾಟ ನಡೆಸುವುದು, ಅಕ್ಕ-ಪಕ್ಕದ ಜಿಲ್ಲೆಗಳ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಅಪರಿಚಿತ ಶವಗಳ UDR ಪ್ರಕರಣಗಳನ್ನು ಪರಿಶೀಲಿಸುವುದು, ಜಿಲ್ಲಾ ಅಪರಾಧ ದಾಖಲಾತಿ ವಿಭಾಗಗಳಲ್ಲಿನ ವರದಿಗಳನ್ನು ಪರಿಶೀಲಿಸುವುದು, ಪೇಪರ್ ಮತ್ತು ದೂರವಾಣಿಯಲ್ಲಿ ಕಾಣೆಯಾದ ಮಕ್ಕಳ ಭಾವಚಿತ್ರವನ್ನು ಪ್ರಸಾರ ಮಾಡುವುದು.
- ಪ್ರತಿ ಮಾನವ ಕಳ್ಳಸಾಗಾಣಿಕೆ ಘಟಕಗಳಿಗೆ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.
- ಮಾನವ ಸಾಗಣಿಕೆ ಮಾಡುವವರ ವಿರುದ್ಧ ಬಾತ್ಮಿ ಸಂಗ್ರಹಿಸಿ ತಪ್ಪಿತಸ್ಥರ ವಿರುದ್ಧ ಕಲಂ.370, 370[ಎ] ಐಪಿಸಿ ಮತ್ತು ಇಮ್‌ಮೋರಲ್ ಟ್ರಾಫಿಕಿಂಗ್ ಪ್ರಿವೆನ್ಷ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ಮತ್ತು ಕಲಂ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾನವ ಕಳ್ಳಸಾಗಾಣಿಕೆಯ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ ನಿರ್ವಹಿಸಲು ತನಿಖಾಧಿಕಾರಿಗಳಿಗಾಗಿ ನಿಧಿಷ್ಟಕಾರ್ಯವಿಧಾನವನ್ನು ಸಿದ್ದಪಡಿಸಿ, ಸ್ಥಾಯಿ ಆದೇಶದ ಮೂಲಕ ರಾಜ್ಯಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.

Scanned with CamScanner

- ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.
- ಅಪರಾಧ ಚಟುವಟಿಕೆಗಳಲ್ಲಿ ಹಾಗೂ ಮಕ್ಕಳ ಬಿಕ್ಷಾಟನೆಯಲ್ಲಿ ತೊಡಗಿಸಿರುವಂತಹ ಅಪರಿಚಿತ ವ್ಯಕ್ತಿಗಳು ಕಂಡು ಬಂದಲ್ಲಿಅಂತಹವರುಕಂಡು ಬಂದಲ್ಲಿ ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಲಾಗಿರುತ್ತದೆ.
- ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ವಿವಿಧ ಹೆಸರುಗಳಡಿಯಲ್ಲಿ ವಿಶೇಷ ಪಡೆಗಳನ್ನು ರಚಿಸಿದ್ದು, ಸದರಿ ಪಡೆಯು ನಗರದ ಮತ್ತು ಜಿಲ್ಲಾ ವ್ಯಾಪ್ತಿಯ ಶಾಲಾ- ಕಾಲೇಜು, ಪಾರ್ಕ್‌ಗಳು, ಹಾಸ್ಟೆಲ್, ಪಿಜಿ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಇತರೆ ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳು ಓಡಾಡುವ ಸ್ಥಳಗಳಲ್ಲಿ ಪ್ರತಿದಿನ ಗಸ್ತು ಮಾಡುತ್ತಾ ಅರಿವು ಮೂಡಿಸಲಾಗುತ್ತಿದೆ.
- ಬಸ್ ನಿಲ್ದಾಣ, ರೈಲು ನಿಲ್ದಾಣ, ವಿಮಾನ ನಿಲ್ದಾಣ ಮತ್ತು ಜನನಿಬಿಡ ಸ್ಥಳಗಳಲ್ಲಿ ಹಾಗೂ ಪ್ರಮುಖ ಸ್ಥಳಗಳನ್ನು ಗುರುತಿಸಿ ಸಿಸಿ ಟಿ.ವಿ ಕ್ಯಾಮರಾಗಳನ್ನು ಅಳವಡಿಸಿದ್ದು ಅವುಗಳ ಸಹಾಯದಿಂದ ಮಹಿಳೆಯರ ಮತ್ತು ಮಕ್ಕಳ ಸಾಗಾಟ ಮಾಡುವವರ ಮೇಲೆ ನಿಗಾವಹಿಸಲಾಗಿದೆ.
- ಪೊಲೀಸ್‌ಠಾಣಾ ವ್ಯಾಪ್ತಿಯಲ್ಲಿನ ಬೀಟ್ ಸಿಬ್ಬಂದಿಗಳ ಮೂಲಕ ಹಾಗೂ ಬೀಟ್‌ಗ್ರೂಪ್ ಸದಸ್ಯರ ಮೂಲಕ ಮಾನವ ಕಳ್ಳಸಾಗಾಣಿಕೆ ಬಗ್ಗೆ ಸಂಬಂಧಿಸಿದಂತೆ ಮುಂಚಿತವಾಗಿ ಮಾಹಿತಿ ಸಂಗ್ರಹಿಸಿ ಸೂಕ್ತ ಮುಂಜಾಗ್ರತಾ ಕ್ರಮ ಕೈಕೊಳ್ಳುವ ವ್ಯವಸ್ಥೆ ಮಾಡಲಾಗಿದೆ.

---

ಹೆಚ್‌ಡಿ 39 ಪಿಸಿಕ್ಯೂ 2023

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು

Scanned with CamScanner